# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1368 (1508) |
| ಮಾನ್ಯ ವಿಧಾನ ಪರಿಷತ್ ಸದಸ್ಯರ ಹೆಸರು | : | ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾಗಿದ್ದ ದಿನಾಂಕ | : | 20.03.2025 |
| ಉತ್ತರಿಸುವವರು | : | ಮುಖ್ಯಮಂತ್ರಿಯವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ೧) | ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿಯಿರುವ ವಿವಿಧ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಆರ್ಥಿಕ ಇಲಾಖೆಗೆ ಪ್ರಸ್ತಾವನೆಗಳು ಸಲ್ಲಿಕೆಯಾಗಿವೆಯೇ; ಸಲ್ಲಿಕೆಯಾಗಿದ್ದಲ್ಲಿ ಯಾವ ಯಾವ ಇಲಾಖೆಗಳಿಂದ ಯಾವ ಯಾವ ಹುದ್ದೆಗಳ ನೇಮಕಾತಿಗಾಗಿ ಪ್ರಸ್ತಾವನೆಗಳು ಸಲ್ಲಿಕೆಯಾಗಿವೆ; ಅವುಗಳಲ್ಲಿ ಎಷ್ಟು ಹುದ್ದೆಗಳ ನೇಮಕಾತಿಗಾಗಿ ಅನುಮೋದನೆ ನೀಡಲಾಗಿದೆ; | ಸರ್ಕಾರದ ವಿವಿಧ ಇಲಾಖೆಗಳಿಗೆ ಮಂಜೂರಾದ ಹುದ್ದೆಗಳನ್ನು ನೇರ ನೇಮಕಾತಿ ಮತ್ತು ಮುಂಬಡ್ತಿ ಹುದ್ದೆಗಳೆಂದು ಗುರುತಿಸಲಾಗಿದೆ. ಇವುಗಳ ಪೈಕಿ ಮುಂಬಡ್ತಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಆಡಳಿತ ಇಲಾಖೆಗಳಿಗೆ ಅಧಿಕಾರವಿರುತ್ತದೆ. ಸದರಿ ಮುಂಬಡ್ತಿ ಹುದ್ದೆಗಳ ಭರ್ತಿಗೆ ಆರ್ಥಿಕ ಇಲಾಖೆಯ ಅನುಮತಿ ಅಗತ್ಯವಿರುವುದಿಲ್ಲ. ನೇರ ನೇಮಕಾತಿಗೆ ಸಂಬಂಧಿಸಿದಂತೆ ಆರ್ಥಿಕ ಮಿತವ್ಯಯ ಜಾರಿಯಲ್ಲಿದ್ದರೂ ಸಹ ಇಲಾಖೆಗಳಿಂದ ಬರುವ ಪ್ರಸ್ತಾವನೆಗಳನ್ನು ಪ್ರಕರಣವಾರು ಪರಿಶೀಲಿಸಿ ಸಾರ್ವಜನಿಕ ಕೆಲಸ ಕಾರ್ಯಗಳಿಗೆ ತೊಂದರೆಯಾಗದಂತೆ ಮತ್ತು ಇಲಾಖೆಗೆ ನಿಗದಿಪಡಿಸಿರುವ ಕರ್ತವ್ಯ ಮತ್ತು ಜವಾಬ್ದಾರಿಗಳನ್ನು ನಿರ್ವಹಿಸಲು ಅಗತ್ಯತೆಗೆ ಅನುಗುಣವಾಗಿ ಅವಶ್ಯವಿರುವ ಸಿಬ್ಬಂದಿಯನ್ನು ಭರ್ತಿ ಮಾಡಲು ಪರಿಶೀಲಿಸಿ ಆರ್ಥಿಕ ಇಲಾಖೆಯು ಅನುಮತಿ ನೀಡಲಾಗುತ್ತಿದೆ.<br><br>ಕಲ್ಯಾಣ ಕರ್ನಾಟಕ ಹುದ್ದೆಗಳಿಗೆ ಸಂಬಂಧಿಸಿದಂತೆ, ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಆಇ 02 ಬಿಇಎಂ 2021 ರನ್ವಯ ಶೇ. 80 ರಷ್ಟು ಹುದ್ದೆಗಳನ್ನು ನೇರ ನೇಮಕಾತಿಯಡಿ ಭರ್ತಿ ಮಾಡಿಕೊಳ್ಳಲು ಆಡಳಿತ ಇಲಾಖೆಯ ಹಂತದಲ್ಲಿಯೇ ಮುಂದುವರೆಸಲು ಹಾಗೂ ಶೀಘ್ರಲಿಪಿಗಾರರು, ಬೆರಳಚ್ಚುಗಾರರ, ವಾಹನ ಚಾಲಕರು ಮತ್ತು ಗ್ರೂಪ್ - ಡಿ ವೃಂದಗಳ ಹುದ್ದೆಗಳನ್ನು ಅನುದಾನದ ಲಭ್ಯತೆಗೊಳಪಟ್ಟು ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಿಕೊಳ್ಳಲು ಸಹಮತಿ ನೀಡಿದೆ.<br>ಅನುಕಂಪದ ಆಧಾರದ ನೇಮಕಾತಿ ಪ್ರಕರಣಗಳಿಗೆ ಸಂಬಂಧಿಸಿದಂತೆ ನೇಮಕಾತಿ ಆದೇಶ ನೀಡಲು ಸುತ್ತೋಲೆ ಸಂಖ್ಯೆ: ಆಇ 05 ಬಿಇಎಂ 2020, 12.01.2021 ರನ್ವಯ ಸಹಮತಿ ನೀಡಿದೆ.<br>ಬ್ಯಾಕಲಾಗ್ ಹುದ್ದೆಗಳಿಗೆ ಸಂಬಂಧಿಸಿದಂತೆ ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಆಇ 02 ಬಿಇಎಂ 2021, ದಿನಾಂಕ: 04.07.2022ರ ಸೂಚನೆಯನ್ವಯ ಕ್ರಮ ಕೈಗೊಳ್ಳಲು ತಿಳಿಸಿದೆ.<br><br>2024-25ನೇ ಸಾಲಿನಲ್ಲಿ ಮಾರ್ಚ್ 31, 2025ರ ಅಂತ್ಯಕ್ಕೆ ವಿವಿಧ ಇಲಾಖೆಗಳಿಂದ ಹುದ್ದೆಗಳ ನೇಮಕಾತಿಗಾಗಿ ಸಲ್ಲಿಕೆಯಾಗಿದ್ದ ಪ್ರಸ್ತಾವನೆಗಳನ್ನು ಪರಿಶೀಲಿಸಿ, ವಿವಿಧ ವೃಂದದ ಒಟ್ಟು 18573 ಹುದ್ದೆಗಳನ್ನು ನೇರ ನೇಮಕಾತಿ ಮುಖಾಂತರ ಭರ್ತಿ ಮಾಡಿಕೊಳ್ಳಲು ಆರ್ಥಿಕ ಇಲಾಖೆಯು ಸಹಮತಿ ನೀಡಿದೆ. |
| ೨) | ಪ್ರಸ್ತುತ ರಾಜ್ಯ ಸರ್ಕಾರದಲ್ಲಿ ಖಾಲಿಯಿರುವ (ಈಗಾಗಲೇ ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ಕಳಿಸಿರುವ 384 ಹುದ್ದೆಗಳ ನೇಮಕಾತಿಯನ್ನು ಹೊರತು ಪಡಿಸಿ) ಕೆಎಎಸ್ ಗಜೆಟೆಡ್ ಪ್ರೊಬೆಷನರ್ಸ್ ಹುದ್ದೆಗಳ ಸಂಖ್ಯೆ ಎಷ್ಟು; ಮಂಜೂರಾಗಿರುವ ಮತ್ತು ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು; (ಇಲಾಖಾವಾರು ವಿವರ ನೀಡುವುದು) | ನೇರ ನೇಮಕಾತಿಗಾಗಿ ಈಗಾಗಲೇ ಕರ್ನಾಟಕ ಲೋಕಸೇವಾ ಆಯೋಗಕ್ಕೆ ಬಿಡುಗಡೆಗೊಳಿಸಿರುವ 384 ಹುದ್ದೆಗಳ ನೇಮಕಾತಿಯನ್ನು ಹೊರತುಪಡಿಸಿ ಪ್ರಸ್ತುತ ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿಯಿರುವ ಗೆಜೆಟೆಡ್ ಪ್ರೊಬೇಷನರ್ಸ್ (ಕೆ.ಎ.ಎಸ್) ಹುದ್ದೆಗಳ ಸಂಖ್ಯೆ: 140<br><br>ಮಂಜೂರಾಗಿ ಖಾಲಿಯಿರುವ ಹುದ್ದೆಗಳ ಇಲಾಖಾವಾರು ಮಾಹಿತಿ ಈ ಕೆಳಕಂಡಂತಿದೆ.<br><br>1. ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು-2):-40<br>2. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ:-15<br>3. ಕಂದಾಯ ಇಲಾಖೆ:-25<br>4. ಆರ್ಥಿಕ ಇಲಾಖೆ:-60 |

| | | |
|---|---|---|
| ಇ) | ಪ್ರಸ್ತುತ ನೇಮಕಾತಿ ಹಂತದಲ್ಲಿರುವ 384 ಕೆಎಎಸ್ ಗೆಜೆಟೆಡ್ ಪ್ರೊಬೆಷನರ್ಸ್ ಹುದ್ದೆಗಳನ್ನು ಹೊರತು ಪಡಿಸಿ ಇನ್ನೂ ಎಷ್ಟು ಹುದ್ದೆಗಳ ನೇಮಕಾತಿಗಾಗಿ ಅನುಮೋದನೆಯನ್ನು ನೀಡಲಾಗಿದೆ? (ಮಾಹಿತಿಯನ್ನು ಒದಗಿಸುವುದು) | ಪ್ರಸ್ತುತ ಚಾಲ್ತಿಯಲ್ಲಿರುವ 384 ಹುದ್ದೆಗಳ ನೇಮಕಾತಿ ಪ್ರಕ್ರಿಯೆಯು ಪೂರ್ಣಗೊಂಡ ನಂತರ ಖಾಲಿಯಿರುವ ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳನ್ನು ಭರ್ತಿ ಮಾಡಲು ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತದೆ. |

**ಕಡತ ಸಂಖ್ಯೆ: ಸಿಆಸುಇ 212 ರಾಸ 2025**

**(ಸಿದ್ದರಾಮಯ್ಯ)**
**ಮುಖ್ಯಮಂತ್ರಿ**